ಕರ್ನಾಟಕ ಸರ್ಕಾರ

ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ,

6ನೇ ಅಡ್ಡರಸ್ತೆ,ಮಲ್ಲೇಶ್ವರಂ, ಬೆಂಗಳೂರು-560003

ಸಂಖ್ಯೆ : ಕ.ಶಾ.ಪ & ಮೌ.ಮ/ಪರೀಕ್ಷೆ/2022-23 ದಿನಾಂಕ :19.12.2022

ಸುತ್ತೋಲೆ

ವಿಷಯ: 2022-23ನೇ ಸಾಲಿನ ಪ್ರಥಮ ಪಿಯುಸಿ ವಾರ್ಷಿಕ ಪರೀಕ್ಷೆ, ಪ್ರಾಯೋಗಿಕ ಪರೀಕ್ಷೆ ಮತ್ತು ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆ, ಪೂರ್ವ ಸಿದ್ಧತಾ ಪರೀಕ್ಷೆ ಹಾಗೂ ವಾರ್ಷಿಕ ಪರೀಕ್ಷೆಗೆ ಸಂಬಂಧಿಸಿದಂತೆ ವೇಳಾಪಟ್ಟಿಗಳನ್ವಯ ಪರೀಕ್ಷೆಗಳನ್ನು ನಡೆಸುವ ಕುರಿತು.

******

2022-23ನೇ ಸಾಲಿನ ಪ್ರಥಮ ಪಿಯುಸಿ ವಾರ್ಷಿಕ ಪರೀಕ್ಷೆ, ಪ್ರಾಯೋಗಿಕ ಪರೀಕ್ಷೆ ಮತ್ತು ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆ, ಪೂರ್ವ ಸಿದ್ಧತಾ ಪರೀಕ್ಷೆ ಹಾಗೂ ವಾರ್ಷಿಕ ಪರೀಕ್ಷೆಗೆ ಸಂಬಂಧಿಸಿದಂತೆ ವೇಳಾಪಟ್ಟಿಗಳನ್ನು ಈ ಕೆಳಕಂಡ ದಿನಾಂಕದೊಳಗೆ ನಡೆಸಲು ಸೂಚಿಸಿದೆ.

2022-23ನೇ ಸಾಲಿನ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆ ನಡೆಸುವ ಕುರಿತು.

- 2022-23ನೇ ಸಾಲಿನ ದ್ವಿತೀಯ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು ದಿನಾಂಕ:06.02.2023 ರಿಂದ 28.02.2023 ರವರೆಗೆ ನಡೆಸಲು ದಿನಾಂಕವನ್ನು ನಿಗದಿಪಡಿಸಲಾಗಿದೆ.

2022-23ನೇ ಸಾಲಿನ ದ್ವಿತೀಯ ಪಿಯುಸಿ ಪೂರ್ವ ಸಿದ್ಧತಾ ಪರೀಕ್ಷೆ ನಡೆಸುವ ಕುರಿತು.

- 2022-23ನೇ ಸಾಲಿನ ದ್ವಿತೀಯ ಪಿಯುಸಿ ಪೂರ್ವ ಸಿದ್ಧತಾ ಪರೀಕ್ಷೆಗಳನ್ನು ದಿನಾಂಕ:23.01.2023 ರಿಂದ 04.02.2023 ರವರೆಗೆ ಜಿಲ್ಲಾ ಉಪನಿರ್ದೇಶಕರ ನೇತೃತ್ವದಲ್ಲಿ ಪ್ರಶ್ನೆಪತ್ರಿಕೆಗಳನ್ನು ಸಿದ್ಧಪಡಿಸಿ, ಪರೀಕ್ಷೆಗಳನ್ನು ನಡೆಸಲು ದಿನಾಂಕವನ್ನು ನಿಗದಿಪಡಿಸಲಾಗಿದೆ.

2022-23ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯ ವೇಳಾಪಟ್ಟಿ ಕುರಿತು.

- 2022-23ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯನ್ನು ದಿನಾಂಕ:09.03.2023 ರಿಂದ 29.03.2023 ರವರೆಗೆ ನಡೆಸಲು ಅಂತಿಮ ವೇಳಾಪಟ್ಟಿಯನ್ನು ಪ್ರಕಟಿಸಲಾಗಿದೆ.

2022-23ನೇ ಸಾಲಿನ ಪ್ರಥಮ ಪಿಯುಸಿ ವಾರ್ಷಿಕ ಪರೀಕ್ಷೆ ನಡೆಸುವ ಕುರಿತು.

- 2022-23ನೇ ಸಾಲಿನ ಪ್ರಥಮ ಪಿಯುಸಿ ವಾರ್ಷಿಕ ಪರೀಕ್ಷೆಯ ಪ್ರಶ್ನೆಪತ್ರಿಕೆಗಳನ್ನು ಆಯಾ ಜಿಲ್ಲಾ ಉಪನಿರ್ದೇಶಕರ ನೇತೃತ್ವದಲ್ಲಿ ಸಿದ್ಧಪಡಿಸಿ ದಿನಾಂಕ:20.02.2023 ರಿಂದ 04.03.2023 ರವರೆಗೆ ಪರೀಕ್ಷೆಯನ್ನು ನಡೆಸಲು ಸೂಚಿಸಿದೆ. ಪ್ರಥಮ ಪಿಯುಸಿ ಪ್ರಾಯೋಗಿಕ ಪರೀಕ್ಷೆಗಳನ್ನು ಪ್ರಥಮ ಪಿಯುಸಿ ತಾತ್ವಿಕ ಪರೀಕ್ಷೆಗೂ ಮೊದಲು ಕಾಲೇಜು ಹಂತದಲ್ಲಿ ನಡೆಸಲು ಸೂಚಿಸಿದೆ.
- 2022-23ನೇ ಸಾಲಿನ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಭಾಷಾ ವಿಷಯಗಳು ಹಾಗೂ ಐಚ್ಛಿಕ ವಿಷಯಗಳ ಪಠ್ಯಕ್ರಮದಲ್ಲಿ ಯಾವುದೆ ಕಡಿತವಾಗಿಲ್ಲದಿರುವುದರಿಂದ ಶೇ 100 ರಷ್ಟು ಪಠ್ಯಕ್ರಮಕ್ಕೆ ಪ್ರಶ್ನೆಗಳನ್ನು ನೀಡಿ ಪರೀಕ್ಷೆಗಳನ್ನು ನಡೆಸಲಾಗುವುದು.
- ಪ್ರಥಮ ಹಾಗೂ ದ್ವಿತೀಯ ಪಿಯುಸಿ ಮಾದರಿ ಪ್ರಶ್ನೆಪತ್ರಿಕೆಗಳನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು.

ಮಾನ್ಯ ಅಧ್ಯಕ್ಷರಿಂದ ಅನುಮೋದಿಸಿದೆ

ನಿರ್ದೇಶಕರು(ಪರೀಕ್ಷೆಗಳು)
ಕರ್ನಾಟಕ ಶಾಲಾ ಪರೀಕ್ಷೆ ಮತ್ತು
ಮೌಲ್ಯನಿರ್ಣಯ ಮಂಡಲಿ.

ಪ್ರತಿಗಳು :

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಕ್ರಮಕ್ಕಾಗಿ.
2. ಪದವಿ ಪೂರ್ವ ಶಿಕ್ಷಣ ಬೋಧಿಸುವ ರಾಜ್ಯದ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ, ಜಿಲ್ಲಾ ಉಪನಿರ್ದೇಶಕರುಗಳ ಮೂಲಕ.
3. ಸಹಾಯಕ ನಿರ್ದೇಶಕರು, ಗಣಕ ಶಾಖೆ, ಕರ್ನಾಟಕ ಶಾಲಾ ಶಿಕ್ಷಣ ಮತ್ತು ಮೌಲ್ಯನಿರ್ಣಯ ಮಂಡಲಿ. (ಇಲಾಖಾ ಅಂತರ್ಜಾಲದಲ್ಲಿ ಪ್ರಕಟಿಸಲು).
4. ಹೆಚ್ಚುವರಿ / ಕಛೇರಿ ಪ್ರತಿ.